# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು - 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719

ಸಂಖ್ಯೆ: ತುವಿ:ಶೈವಿ:ಸ್ನಾಪ್ರ:2018–19: 1428 ದಿನಾಂಕ:04.08.2018

## :ಸುತ್ತೋಲೆ:

ವಿಷಯ: 2018-19 ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಶುಲ್ಕ ಪಾವತಿ ಕುರಿತು.

ಉಲ್ಲೇಖ: 1) ತುವಿ:ಶೈವಿ:2018-19 ದಿನಾಂಕ: 13.06.2018

2) ತುವಿ:ಶೈವಿ: 2018-19:583 ದಿನಾಂಕ: 08.06.2018

3) ಸರ್ಕಾರದ ಆದೇಶ ಸಂಖ್ಯೆ: ಸಕಇ 178 ಪಕವಿ 2015 ದಿನಾಂಕ:31.12.2015

4) ವಿದ್ಯಾರ್ಥಿಗಳ ಮನವಿ ಪತ್ರ ದಿನಾಂಕ:03.08.2018

5) ಮಾನ್ಯ ಕುಲಪತಿಯವರ ನಿರ್ದೇಶನದ ದಿನಾಂಕ:04.08.2018

* * * * *

ತುಮಕೂರು ವಿಶ್ವವಿದ್ಯಾನಿಲಯದ 2018-19 ನೇ ಶೈಕ್ಷಣಿಕ ಸಾಲಿನ ವಿವಿಧ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕಗಳ ಮಾಹಿತಿಯನ್ನು ಉಲ್ಲೇಖ(01) ರ ಅಧಿಸೂಚನೆಯಲ್ಲಿ ಅಧಿಸೂಚಿಸಿದ್ದು, ಪ.ಜಾ./ಪ.ಪಂ ಪಂಗಡದ ವಿದ್ಯಾರ್ಥಿಗಳು ಸರ್ಕಾರದ ಆದೇಶದಂತೆ ನಿಗದಿತ ಕುಟುಂಬದ ವಾರ್ಷಿಕ ವರಮಾನ ಹೊಂದಿರುವ ಕುಟುಂಬಗಳ ವಿದ್ಯಾರ್ಥಿಗಳ ಮರುಭರಿಸುವ ಶುಲ್ಕಗಳ ಮಾಹಿತಿಯನ್ನು ನೀಡಲಾಗಿರುತ್ತದೆ. ಉಲ್ಲೇಖ(03) ರ ಸರ್ಕಾರದ ಆದೇಶದಂತೆ ಮರುಭರಿಸಲಾಗದ ಶುಲ್ಕವನ್ನು ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳುವಂತೆ ಸೂಚನೆ ನೀಡಲಾಗಿರುತ್ತದೆ.

ಉಲ್ಲೇಖ(02) ರ ಅಧಿಸೂಚನೆಯಲ್ಲಿ ಸ್ನಾತಕೋತ್ತರ ಪದವಿ ಕೋರ್ಸ್‌ಗಳ ಶೈಕ್ಷಣಿಕ ವೇಳಾಪಟ್ಟಿಯಲ್ಲಿ 3 ನೇ ಸೆಮಿಸ್ಟರ್‌ಗೆ ಪ್ರವೇಶ ಪಡೆಯಲು ಕೊನೆಯ ದಿನಾಂಕ:04.08.2018 ರಂದು ತಿಳಿಸಲಾಗಿದೆ. ಉಲ್ಲೇಖ(04) ರಲ್ಲಿ ಹಲವು ವಿದ್ಯಾರ್ಥಿಗಳು ಪ್ರವೇಶ ಶುಲ್ಕಕ್ಕೆ ಸಂಬಂಧಿಸಿದಂತೆ ವಿನಾಯಿತಿ ನೀಡಲು ಮನವಿ ಸಲ್ಲಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ 2018-19 ನೇ ಶೈಕ್ಷಣಿಕ ಸಾಲಿಗೆ 03 ನೇ ಸೆಮಿಸ್ಟರ್ ಗೆ ಪ್ರವೇಶ ಪಡೆಯುವ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಪ್ರವೇಶಾತಿಗೆ ಕೊನೆಯ ದಿನಾಂಕವನ್ನು 04.08.2018 ರಿಂದ 13.08.2018 ಕ್ಕೆ ಮುಂದೂಡಲಾಗಿದೆ, ಹಾಗೂ ಪ.ಜಾ/ಪ.ಪಂ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಮರುಭರಿಸಲಾಗದ ಶುಲ್ಕಗಳನ್ನು ತಕ್ಷಣವೇ ಪಾವತಿಸುವಂತೆ ಒತ್ತಾಯಿಸದೇ ಪ್ರವೇಶಾತಿ ಮಾಡಿಕೊಳ್ಳಲು ಈ ಮೂಲಕ ತಿಳಿಸಲಾಗಿದೆ. ಪ.ಜಾ/ಪ.ಪಂ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಮರುಭರಿಸಲಾಗದ ಶುಲ್ಕಗಳನ್ನು ಪಾವತಿಸಲು ಉಲ್ಲೇಖ(05)ರ ನಿರ್ದೇಶನದ ಮೇರೆಗೆ ಒಂದು ತಿಂಗಳ ಕಾಲಾವಕಾಶ ನೀಡಲಾಗಿದೆ ಎಂದು ಈ ಮೂಲಕ ತಿಳಿಸಲಾಗಿದೆ

ಕುಲಸಚಿವರು 4/8/18

ಕುಲಸಚಿವರು

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಮುಖ್ಯಸ್ಥರು/ಸಂಯೋಜಕರು, ತು.ವಿ.ತು.
2. ಪ್ರಾಂಶುಪಾಲರುಗಳು, ಘಟಕ ಮತ್ತು ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತು.ವಿ.ತು.

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕಚೇರಿ ಪ್ರತಿ.